<u>**ಕರ್ನಾಟಕ ವಿಧಾನ ಪರಿಷತ್ತು**</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 574 |
| ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾಗಿದ್ದ ಸಚಿವರು | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |
| ಉತ್ತರಿಸಬೇಕಾಗಿದ್ದ ದಿನಾಂಕ | 11.03.2025 |
| ಉತ್ತರಿಸುವವವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳು (ಪಿ ಎಸ್ ಯು) ಯಾವುವು; ಈ ಸಾರ್ವಜನಿಕ ಉದ್ಯಮಗಳಲ್ಲಿ ಲಾಭದಲ್ಲಿ ಮುಂದುವರೆಯುತ್ತಿರುವ ಉದ್ಯಮಗಳ ಸಂಖ್ಯೆ ಎಷ್ಟು; ನಷ್ಟದಲ್ಲಿರುವ ಉದ್ಯಮಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ರಾಜ್ಯದಲ್ಲಿರುವ ಸಾರ್ವಜನಿಕ ಉದ್ಯಮಗಳ ಮಾಹಿತಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.<br><br>ಲಾಭದಲ್ಲಿರುವ ಉದ್ದಿಮೆಗಳು 36 ಹಾಗೂ ನಷ್ಟದಲ್ಲಿರುವ ಉದ್ದಿಮೆಗಳು 33. ಮಾಹಿತಿಯನ್ನು **ಅನುಬಂಧ-2** ರಲ್ಲಿ ಇರಿಸಿದೆ. |
| ಆ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇರುವ ಸಾರ್ವಜನಿಕ ಉದ್ಯಮಗಳು ಯಾವುವು; | ರಾಜ್ಯ ಸರ್ಕಾರದ ಅಧೀನದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ರಾಜ್ಯವ್ಯಾಪಿ ಹಾಗೂ ರಾಷ್ಟ್ರವ್ಯಾಪಿ ಕಾರ್ಯನಿರ್ವಹಿಸುತ್ತಿದ್ದು, ಯಾವುದೇ ಜಿಲ್ಲೆ ಅಥವಾ ತಾಲ್ಲೂಕುಗಳಿಗೆ ಸೀಮಿತವಾಗಿರುವುದಿಲ್ಲ. |
| ಇ) | ನಷ್ಟದ ಹಾದಿಯಲ್ಲಿರುವ ಸಾರ್ವಜನಿಕ ಉದ್ಯಮಗಳನ್ನು ಇತರ ಲಾಭದಲ್ಲಿ ಮುಂದುವರೆಯುತ್ತಿರುವ ಉದ್ಯಮಗಳ ಜೊತೆ ವಿಲೀನಗೊಳಿಸಲಾಗಿದೆಯೇ; ಇದರಿಂದ ಉದ್ಯಮ ವಲಯಕ್ಕೆ ಲಾಭವಾಗಿದೆಯೇ; (ವಿವರ ನೀಡುವುದು) | ಪ್ರಸ್ತುತ ನಷ್ಟದ ಹಾದಿಯಲ್ಲಿರುವ ಸಾರ್ವಜನಿಕ ಉದ್ಯಮಗಳನ್ನು ಇತರೆ ಲಾಭದಲ್ಲಿ ಮುಂದುವರೆಯುತ್ತಿರುವ ಉದ್ಯಮಗಳ ಜೊತೆ ವಿಲೀನಗೊಳಿಸಲು ಪ್ರಸ್ತಾವನೆ ಸ್ವೀಕೃತವಾಗುತ್ತಿದ್ದು, ಅವುಗಳ ಆರ್ಥಿಕ ಸ್ಥಿತಿಗತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಪುನಶ್ಚೇತನಗೊಳಿಸುವುದು ಅಸಾಧ್ಯವೆಂದು ಪರಿಗಣಿಸಿದ ಸಂದರ್ಭದಲ್ಲಿ, ಸದರಿ ಉದ್ದಿಮೆಗಳನ್ನು ಇತರ ಉದ್ದಿಮೆಗಳೊಂದಿಗೆ ವಿಲೀನಗೊಳಿಸಲು ಕ್ರಮವಹಿಸಲಾಗುತ್ತದೆ.<br>ಇದರಿಂದ, ನಷ್ಟದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ಇನ್ನಷ್ಟು ನಷ್ಟಕ್ಕೆ ಸಿಲುಕುವುದನ್ನು ತಪ್ಪಿಸುವುದರೊಂದಿಗೆ ಹಾಗೂ ಅನಗತ್ಯ ಆಡಳಿತಾತ್ಮಕ ವೆಚ್ಚಗಳನ್ನು ಕಡಿತಗೊಳಿಸಲು ಸಹಕಾರಿಯಾಗುತ್ತದೆ. |
| ಈ) | ಕಳೆದ ಮೂರು ವರ್ಷಗಳಲ್ಲಿ ನಷ್ಟದಲ್ಲಿರುವ ಉದ್ಯಮಗಳಲ್ಲಿ ಪುನಶ್ಚೇತನ ಯೋಜನೆಗಳು ವಿಫಲವಾಗಿ ಪೂರ್ಣಕಾಲಿಕವಾಗಿ ಮುಚ್ಚಿರುವ ಉದ್ಯಮಗಳು ಯಾವುವು; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಿಬ್ಬಂದಿಗಳಿಗೆ ಪುನರ್ವಸತಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ (ವಿವರ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ನಷ್ಟದಲ್ಲಿರುವ ಉದ್ಯಮಗಳಲ್ಲಿ ಪುನಶ್ಚೇತನ ಯೋಜನೆಗಳು ವಿಫಲವಾಗಿ ಯಾವುದೇ ಉದ್ದಿಮೆ ಪೂರ್ಣಕಾಲಿಕವಾಗಿ ಮುಚ್ಚಿರುವುದಿಲ್ಲವಾದ್ದರಿಂದ ಅನ್ವಯಿಸುವುದಿಲ್ಲ. |
| ಉ) | ನಷ್ಟದಲ್ಲಿರುವ ಉದ್ಯಮಗಳಿಗೆ ಪುನಶ್ಚೇತನ ಸರಕಾರದಿಂದ ಎಷ್ಟು ಮೊತ್ತವನ್ನು ನೀಡಲಾಗಿದೆ ಈ ಅನುದಾನ ನೀಡಿದ ನಂತರ ಸದರಿ ಉದ್ಯಮಗಳು ಸುಧಾರಿಸಿವೆಯೇ; (ವಿವರ ನೀಡುವುದು) | ನಷ್ಟದಲ್ಲಿರುವ ಸಾರ್ವಜನಿಕ ಉದ್ದಿಮೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ಒದಗಿಸಿರುವ ಮೊತ್ತವನ್ನು ಅನುಬಂಧ-3ರಲ್ಲಿ ಇರಿಸಿದೆ.<br><br>ನಷ್ಟದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಆರ್ಥಿಕ ಸ್ಥಿತಿಗತಿಗಳನ್ನಾಧರಿಸಿ ಸಂಬಂಧಪಟ್ಟ ಕ್ಷೇತ್ರಕ್ಕೆ ಬೆಂಬಲವನ್ನು ನೀಡುವ ಅವಶ್ಯಕತೆ ಇದ್ದಲ್ಲಿ, ವಿತ್ತೀಯ ಅವಕಾಶಗಳ ಆಧಾರದ ಮೇಲೆ ಅಗತ್ಯಕ್ಕನುಗುಣವಾಗಿ ದುಡಿಯುವ ಬಂಡವಾಳ / ಸಾಲ ಮರುಪಾವತಿ / ತೆರಿಗೆ ಪಾವತಿ ಇತ್ಯಾದಿಗಳಿಗಾಗಿ ಅನುದಾನ / ವಿಶೇಷ ಅನುದಾನದ ರೂಪದಲ್ಲಿ ಹಣಕಾಸಿನ ನೆರವನ್ನು ಒದಗಿಸುತ್ತಿದ್ದು, ಇದರಿಂದ ಇತ್ತೀಚಿನ ಕೆಲವು ವರ್ಷಗಳಿಂದ ನಷ್ಟದಲ್ಲಿರುವ ಕೆಲವು ಸಾರ್ವಜನಿಕ ಉದ್ದಿಮೆಗಳು ಲಾಭದತ್ತ / ಸುಧಾರಣೆಯತ್ತ ಮುನ್ನಡೆಯುತ್ತಿರುವುದನ್ನು ಸರ್ಕಾರವು ಮನಗಂಡಿದೆ. |

| | | |
|---|---|---|
| ಇ) | ಬದಲಾಗುತ್ತಿರುವ ಮಾರುಕಟ್ಟೆ ಪರಿಸ್ಥಿತಿಗಳಿಗೆ ಪೂರಕವಾಗಿ ಸಾರ್ವಜನಿಕ ಉದ್ಯಮಗಳು ಸ್ವಯಂ ಆಗಿ ಅಭಿವೃದ್ಧಿ ಹೊಂದಲು ಯಾವ ರೀತಿಯ ಅಗತ್ಯ ಕ್ರಮಗಳನ್ನು ಇಲಾಖೆಯ ಮೂಲಕ ತೆಗೆದುಕೊಳ್ಳಲಾಗುವುದು? | ಬದಲಾಗುತ್ತಿರುವ ಮಾರುಕಟ್ಟೆ ಪರಿಸ್ಥಿತಿಗಳಿಗೆ ಪೂರಕವಾಗಿ ಸಾರ್ವಜನಿಕ ಉದ್ಯಮಗಳು ಸ್ವಯಂ ಆಗಿ ಅಭಿವೃದ್ಧಿ ಹೊಂದಲು ಅನುದಾನ, ಸಾಲ, ಈಕ್ವಿಟಿ ಇತ್ಯಾದಿ ರೂಪದಲ್ಲಿ ಹಣಕಾಸಿನ ನೆರವನ್ನು ನೀಡಲಾಗುತ್ತಿರುವುದಲ್ಲದೆ, ಹಣಕಾಸು ಸಂಸ್ಥೆಗಳಿಂದ ಪಡೆಯುವ ಸಾಲಕ್ಕೆ ಖಾತರಿ ರೂಪದಲ್ಲಿ ಅನುದಾನೇತರ ಬೆಂಬಲವನ್ನೂ ಸಹ ಒದಗಿಸುತ್ತಿದೆ. ಅಲ್ಲದೆ, ಉದ್ಯಮಗಳ ಅಧಿಕಾರಿ ನೌಕರರುಗಳ ಕಾರ್ಯಕ್ಷಮತೆಯನ್ನು ಅಭಿವೃದ್ಧಿಪಡಿಸಲು ತರಬೇತಿ ಕಾರ್ಯಕ್ರಮಗಳನ್ನೂ ಸಹ ಆಯೋಜಿಸಲಾಗುತ್ತದೆ. |

ಆಇ 51 ಐಎನ್‌ವಿ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ